1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**581/2022**

ಹೆಸರುಃ ಸಿದ್ದಪ್ಪ ಚಾಸಾಃ 10

ತಂದೆಃ ಚನ್ನಪ್ಪ ಫ್ರಾಸಾ. 1

ವಯಸ್ಸುಃ 42

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಚನ್ನೇಶಪುರ ಗ್ರಾಮ , ಚನ್ನಗಿರಿ ತಾ.

ಸಾಕ್ಷಿಗೆ ದಿನಾಂಕಃ 04-06-2024 ರಂದು ಪ್ರಮಾಣ ವಚನ ಭೋಧಿಸಲಾಯಿತು

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ವಾಹನ ಬಿಡುಗಡೆ ಪಂಚನಾಮೆಯನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ವಾಹನ ಬಿಡುಗಡೆ ಪಂಚನಾಮೆಯನ್ನು ನಿಶಾನೆ ಪಿ 5 ಎಂದು ಗುರುತಿಸಲಾಗಿದ್ದು , ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ.5 ( ಎ ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ವಾಹನ ಬಿಡುಗಡೆ ಪಂಚನಾಮೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ಬಿಡುಗಡೆಗೊಳಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ವಾಹನ ಬಿಡುಗಡೆ ಪಂಚನಾಮೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ವಾಹನ ಬಿಡುಗಡೆ ಪಂಚನಾಮೆಯನ್ನು ನೋಡಲಾಗಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 07.09.2021 ರಂದು ಚನ್ನಗಿರಿ ಠಾಣಾ ಆವರಣದಲ್ಲಿ ಸಂಜೆ 6.30 ಗಂಟೆಯಿಂದ 7.00 ಗಂಟೆಯವರೆಗೆ , ಚಾಸಾ.7 ರವರು ನನ್ನ ಹಾಗೂ ಚಾಸಾ.9 ರವರ ಸಮಕ್ಷಮ , ನಿ.ಪಿ. 5 ರಂತೆ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ . ನಿಪಿ.5 ನ್ನು ಜರುಗಿಸುವ ಕಾಲಕ್ಕೆ ನನ್ನ ಜೊತೆ ಚಾಸಾ 7 ಮತ್ತು 9 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿಪಿ.5 ನ್ನು ಜರುಗಿಸುವ ಸಮಯದಲ್ಲಿ ಪೊಲೀಸರು ಚಾಸಾ.7 ರವರು ಪಡೆದ ಮಧ್ಯಂತರ ಆದೇಶದ ಮೇರೆಗೆ ಚಾಸಾ.7 ರವರಿಗೆ ಕೆ ಎ 17 ಟಿ ಸಿ 9146 ಮತ್ತು ಕೆ ಎ 17 ಟಿ ಸಿ 9147 ನೊಂದಣಿ ಸಂಖ್ಯೆಯುಳ್ಳ ಟ್ರಾಕ್ಟರ್ ಹಾಗೂ ಟ್ರೈಲರ್ ನ್ನು ಬಿಡುಗಡೆಗೊಳಿಸಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ –.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**